## ಜಿಲ್ಲಾಧಿಕಾರಿಗಳ ಕಾರ್ಯಾಲಯ, ಕಂದಾಯ ಇಲಾಖೆ, ಕಲಬುರಗಿ ಜಿಲ್ಲೆ

**ಸಂಖ್ಯೆ:** ಕಂದಾಯ/ ಸಿಬ್ಬಂದಿ-1/ ಗ್ರಾಲೇನೇಮಕಾತಿ/ 17/ 2015-16 **ದಿನಾಂಕ:** 28.09.2015

**-: ಅಧಿಕೃತ ಜ್ಞಾಪನ :-**

ವಿಷಯ :- ಕಲಬುರಗಿ ಜಿಲ್ಲೆಯ ಕಂದಾಯ ಇಲಾಖೆಯಲ್ಲಿ ಖಾಲಿ ಇರುವ ಗ್ರಾಮಲೆಕ್ಕಾಧಿಕಾರಿಗಳ ಹುದ್ದೆಗಳ ನೇರ ನೇಮಕಾತಿ ಸಂಬಂಧ ಅಭ್ಯರ್ಥಿಗಳ ತಿರಸ್ಕುತ್ತ ಅರ್ಜಿಗಳ ಪಟ್ಟಿ ಪ್ರಕಟಿಸುವ ಬಗ್ಗೆ.

ಉಲ್ಲೇಖ:-
1. ಈ ಕಾರ್ಯಾಲಯದ ಅಧಿಸೂಚನೆ ಸಮ ಸಂಖ್ಯೆ ದಿನಾಂಕ 27.06.2015.
2. ಈ ಕಾರ್ಯಾಲಯದ ಪ್ರಕಣೆ ಸಮ ಸಂಖ್ಯೆ ದಿನಾಂಕ 29.08.2015.
3. ಈ ಕಾರ್ಯಾಲಯದ ಅಧಿಕೃತ ಜ್ಞಾಪನ ಸಮ ಸಂಖ್ಯೆ ದಿನಾಂಕ 18.09.2015.

****

ಕಲಬುರಗಿ ಜಿಲ್ಲೆಯ ಕಂದಾಯ ಇಲಾಖೆಯಲ್ಲಿ ಖಾಲಿ ಇರುವ ಗ್ರಾಮ ಲೆಕ್ಕಾಧಿಕಾರಿಗಳ ಹುದ್ದೆಗಳಿಗೆ ನೇರ ನೇಮಕಾತಿ ಮೂಲಕ ಭರ್ತಿ ಮಾಡುವ ಸಂಬಂಧ 1:5 ಅನುಪಾತದಲ್ಲಿ ಮೆರಿಟ್ ಹಾಗೂ ಮಿಸಲಾತಿ ಅನ್ವಯ ಅರ್ಹ ಅಭ್ಯರ್ಥಿಗಳ ತಾತ್ಕಾಲಿಕ ಪಟ್ಟಿಯನ್ನು ಅನುಭಂದಗಳಲ್ಲಿ ಉಲ್ಲೇಖ-2 ರ ಮೂಲಕ ಪ್ರಕಟಿಸಲಾಗಿತ್ತು. ಅದರಂತೆ ಉಲ್ಲೇಖ-3 ರಲ್ಲಿ ಸಂಬಂದಪಟ್ಟ ಅಭ್ಯರ್ಥಿಗಳು ದಿನಾಂಕ 19.09.2015 ರಂದು ಮೂಲ ದಾಖಲೆಗಳನ್ನು ಈ ಕಛೇರಿಯ ನಿರ್ದಿಷ್ಟಪಡಿಸಿದ ಸಿಬ್ಬಂದಿಗಳಿಗೆ ಅಭ್ಯರ್ಥಿಗಳು ತಮ್ಮ ಮೂಲ ದಾಖಲೆಗಳನ್ನು ಪರಿಶೀಲನೆಗಾಗಿ ಹಾಜರಾಗುವಂತೆ ತಿಳಿಸಲಾಗಿತ್ತು. ಆದರೆ ಹಾಜರಾಗದೇ ಇರುವ ಆಭ್ಯರ್ಥಿಗಳು ಹಾಗೂ ಹೈದ್ರಾಬಾದ-ಕರ್ನಾಟಕ ಪ್ರದೇಶದವರಲ್ಲದ ಅಭ್ಯರ್ಥಿಗಳು ತಾತ್ಕಾಲಿಕ ಅಯ್ಕೆಯನ್ನು ಯಾವುದೇ ಮುನ್ಸೂಚನೆ ನೀಡದೇ ಅಯ್ಕೆ ಪಟ್ಟಿಯಲ್ಲಿನ ಗೈರ ಹಾಜರಾದ ಅಭ್ಯರ್ಥಿಗಳ ಆಯ್ಕೆ ಪ್ರಕ್ರಿಯೆಗೆ ಪರಿಗಣಿಸಿರುವ ಪಟ್ಟಿಯಿಂದ ಕೈಬಿಡಲಾಗುವುದೆಂದು ತಿಳಿಸಲಾಗಿದೆ.

ಅದರಂತೆ ಕೆಳಕಂಡ ತಾತ್ಕಾಲಿಕ ಪಟ್ಟಿಯಲ್ಲಿನ ಗೈರುಹಾಜರಾದ ಅಭ್ಯರ್ಥಿಗಳು ಮೂಲ ದಾಖಲೆಗಳನ್ನು ಸಲ್ಲಿಸದ ಕಾರಣ ಹಾಗೂ ಹೈದ್ರಾಬಾದ-ಕರ್ನಾಟಕ ಪ್ರದೇಶದವರಲ್ಲದ ಅಭ್ಯರ್ಥಿಗಳ ಸಂಬಂಧ ಮಾಹಿತಿಯನ್ನು ಅನುಭಂದಗಳಲ್ಲಿ ಪ್ರಕಟಿಸಲಾಗಿದೆ.

- ಮೂಲ ದಾಖಲಾತಿಗಳನ್ನು ಸಲ್ಲಿಸಲು ದಿನಾಂಕ 19.09.2015 ರಂಧು ಗೈರ ಹಾಜರಾಗಿ ಮೂಲ ದಾಖಲಾತಿಗಳನ್ನು ಸಲ್ಲಿಸದ ಕಾರಣ ತಿರಸ್ಕರಿಸಲಾಗಿದೆ.
- ಹೈದ್ರಾಬಾದ-ಕರ್ನಾಟಕ ಪ್ರದೇಶದವರಲ್ಲದ ಅಭ್ಯರ್ಥಿಗಳ ಅರ್ಜಿಗಳನ್ನು ತಿರಸ್ಕರಿಸಿದೆ.
- ಪಿ.ಯು.ಸಿ. ಪರೀಕ್ಷೆ ಅಥವಾ CBSE ಅಥವಾ ICSE ಗಳ ಶೈಕ್ಷಣಿಕ ವಿದ್ಯಾರ್ಹತೆಗಳನ್ನು ಮಾತ್ರ ಪರಿಗಣಿಸಿದ್ದು, ಉಳಿದ ಅರ್ಜಿಗಳನ್ನು ತಿರಸ್ಕರಿಸಲಾಗಿದೆ.

**ಜಿಲ್ಲಾಧಿಕಾರಿಗಳು ಮತ್ತು ಅಧ್ಯಕ್ಷರು**
**ಗ್ರಾಮಲೆಕ್ಕಿಗರ ನೇಮಕಾತಿ ಪ್ರಾಧಿಕಾರ**
**ಕಲಬುರಗಿ ಜಿಲ್ಲೆ ಕಲಬುರಗಿ.**

ಪ್ರತಿಯನ್ನು:-
1. ಡಿಐಓ, ಎನ್‌ಐಸಿ ಕಲಬುರಗಿ ಇವರಿಗೆ ಸದರಿ ಅಧಿಕೃತ ಜ್ಞಾಪನ ಹಾಗೂ ತಿರಸ್ಕರಿಸಿದ ಅರ್ಜಿಗಳ ಪಟ್ಟಿಯನ್ನು ವೆಬ್ ಸೈಟ್‌ನಲ್ಲಿ ಪ್ರಕಟಿಸಲು ಕೋರಿದೆ.
2. ಈ ಕಛೇರಿಯ ಸೂಚನಾ ಫಲಕದಲ್ಲಿ ಪ್ರಕಟಿಸಲು.
3. ಹೆಚ್ಚಿನ ಪ್ರತಿ